# ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ

## ಬೆಂಗಳೂರು ನಗರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ(ರಿ)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

NATIONAL URBAN HEALTH MISSION

ನಗರ ಯೋಜನಾ ನಿರ್ವಹಣಾಧಿಕಾರಿಗಳ ಕಛೇರಿ, ಅನೆಕ್ಸ್ ಕಟ್ಟಡ-3, 3ನೇ ಮಹಡಿ, ಬಿ.ಬಿ.ಎಂ.ಪಿ ಕೇಂದ್ರಕಛೇರಿ, ಎನ್.ಆರ್.ಚೌಕ, ಬೆಂಗಳೂರು-02.

ಸಂಖ್ಯೆ: ಸಿ.ಪಿ.ಎಂ.ಓ/ಎನ್.ಯು.ಹೆಚ್.ಎಂ/ಪಿ.ಆರ್/ ಪಿ-52/2024-25 ದಿನಾಂಕ:29-07-2024

ರವರಿಗೆ,

**DCIO,**
ಮಾಹಿತಿ ತಂತ್ರಜ್ಞಾನ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು.

ಮಾನ್ಯರೇ,

ವಿಷಯ :ಪಾಲಿಕೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ರೆಫರಲ್ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳಿಗೆ ಆಸಕ್ತಿವುಳ್ಳ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಮೂಲ ಕಡತದ ಕಂಡಿಕೆ(82)ರಲ್ಲಿನ ಮಾನ್ಯ ಮುಖ್ಯ ಆಯುಕ್ತರವರ ಅನುಮೋದನೆ ದಿನಾಂಕ:18-06-2024..

***

ಮೇಲ್ಕಂಡ ವಿಷಯಕ್ಕೆ ಸಂಬಂಧಪಟ್ಟಂತೆ, ಈ ಕೆಳಕಂಡಂತೆ ಇರುವ ಪತ್ರಿಕಾ ಪ್ರಕಟಣೆಯನ್ನು ನಿಯಮಾನುಸಾರ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಗೊಳಿಸಲು ಈ ಮೂಲಕ ತಮ್ಮಲ್ಲಿ ಕೋರಲಾಗಿದೆ.

## ಪತ್ರಿಕಾ ಪ್ರಕಟಣೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ರೆಫರಲ್ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳಿಗೆ 01 ವರ್ಷದ ಅವಧಿಗೆ ಸಂಪೂರ್ಣವಾಗಿ ಗುತ್ತಿಗೆ ಆಧಾರದ ಮೇಲೆ ಈ ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ ಖಾಲಿ ಇರುವಂತಹ ಸಂಖ್ಯೆಗಳಿಗೆ ಹಾಗೂ ಮುಂದಿನ ದಿನಗಳಲ್ಲಿ ಖಾಲಿಯಾಗುವ ಹುದ್ದೆಗಳು ಭರ್ತಿಯಾಗುವವರೆಗೂ ನೇಮಕಾತಿ ಮಾಡಿಕೊಳ್ಳಲು ಆಸಕ್ತಿವುಳ್ಳ ಅಭ್ಯರ್ಥಿಗಳಿಂದ ಈ ಕೆಳಕಂಡ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರಮ ಸಂಖ್ಯೆ | ಹುದ್ದೆಯ ಹೆಸರು | ಗರಿಷ್ಠ ವಯೋಮಿತಿ (ಎನ್.ಹೆಚ್.ಎಂ ಮಾರ್ಗಸೂಚಿ) | ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ಸಂಚಿತ ವೇತನ ಪ್ರತಿ ಮಾಹೆಯಾನ |
|---|---|---|---|---|---|
| 1 | ವೈದ್ಯಾಧಿಕಾರಿಗಳು | 65 | 23 | ಎಂಬಿಬಿಎಸ್ ಪದವಿಯೊಂದಿಗೆ ಕೆ.ಎಂ.ಸಿ ರಿಜಿಸ್ಟ್ರೇಷನ್ | 47,250/- |

ಆಸಕ್ತ ಅಭ್ಯರ್ಥಿಗಳು ಸಂಬಂಧಿಸಿದ ವಿದ್ಯಾರ್ಹತೆಯ ಮೂಲ ದಾಖಲೆಗಳು ಮತ್ತು ಒಂದು ಜೆರಾಕ್ಸ್ ಪ್ರತಿ, ಭಾವಚಿತ್ರದೊಂದಿಗೆ ಮುಖ್ಯ ಆರೋಗ್ಯಾಧಿಕಾರಿ (ಸಾರ್ವಜನಿಕ ಆರೋಗ್ಯ) ರವರ ಕಛೇರಿ, #304, ಅನೆಕ್ಸ್-3 ಕಟ್ಟಡ, 3ನೇ ಮಹಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೇಂದ್ರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು-560 002 ವಿಳಾಸಕ್ಕೆ ಖುದ್ದಾಗಿ ಅರ್ಜಿ ಸಲ್ಲಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಗೊಳಿಸಲು ತಮ್ಮಲ್ಲಿ ಕೋರಲಾಗಿದೆ.

ಸೂಚನೆ –**"ಮೊದಲು ಬಂದವರಿಗೆ ಮೊದಲ ಅದ್ಯತೆ"**

ವಂದನೆಗಳೊಂದಿಗೆ,

SDA/Kavi
29/07/2024

ಮುಖ್ಯ ಆರೋಗ್ಯಾಧಿಕಾರಿ (ಸಾ.ಆ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ವಿಭಾಗ
ಸ್ವೀಕೃತಿ: 610
ದಿನಾಂಕ: 29/07/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಎನ್.ಆರ್.ಚೌಕ, ಬೆಂಗಳೂರು

ಪ್ರತಿಗಳು :

1. ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ನಗರ ಯೋಜನಾ ನಿರ್ವಹಣಾಧಿಕಾರಿಗಳು, ಎನ್.ಯು.ಹೆಚ್.ಎಂ ರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಕಛೇರಿ ಕಡತಕ್ಕೆ.